ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ
"ಸಾರಿಗೆ ಭವನ" ಕೇಂದ್ರ ಕಛೇರಿ,
ಕೆ.ಹೆಚ್.ರಸ್ತೆ, ಶಾಂತಿನಗರ, ಬೆಂಗಳೂರು-560 027. ಭಾರತ
ದೂರವಾಣಿ : 080-22221321 / 22221325
ವೆಬ್-ಸೈಟ್ : ksrtc.karnataka.gov.in

Karnataka State Road Transport Corporation
"Transport House" Central Offices,
K.H.Road, Shanthinagar, Bangalore-560 027. India
Tel : 080-22221321 / 25
Website : ksrtc.karnataka.gov.in

ಸಂ.ಕರಾಸ:ಕೇಕ:ಆಡಳಿತ:ಸೇನಿ:/582/ 309 /2025-26 ದಿನಾಂಕ: 18 -07-2025

## ಸುತ್ತೋಲೆ ಸಂಖ್ಯೆ : 1738

ವಿಷಯ: ನಿಗಮದ ಎಲ್ಲಾ ಕಛೇರಿಗಳಲ್ಲಿ ನಗದು ಘೋಷಣೆ ವಹಿಯನ್ನು ನಿರ್ವಹಣೆ ಮಾಡುವ ಕುರಿತು.

ಉಲ್ಲೇಖ: 1. ಕರಾಸಾ/ಕೇಕ/ಆಡಳಿತ/ಸೇನಿ/69/2017-18 ದಿನಾಂಕ: 28.06.2017.
2. ಸಿಆಸುಇ (ಆಸು) 21 ಕತವ 2022 ದಿನಾಂಕ:04.02.2022
3. ಸಿಆಸುಇ (ಆಸು) 21 ಕತವ 2022 ದಿನಾಂಕ:14.03.2022
4. ಅ.ಸ.ಪತ್ರ ಸಂಖ್ಯೆ: ಸಿಆಸುಇ(ಅಸು) 19 ಈಕಾಅ 2025 ದಿನಾಂಕ: 12.03.2025

- - - -

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಗಳಿಗೆ ಸಂಬಂಧಿಸಿದಂತೆ, ಸರ್ಕಾರವು ಉಲ್ಲೇಖ-2 ಮತ್ತು 3 ರಲ್ಲಿ ಕಛೇರಿಗಳಲ್ಲಿ ನಗದು ಘೋಷಣೆ ವಹಿ ನಿರ್ವಹಣೆ ಕುರಿತು ವಿವರವಾಗಿ ಮಾರ್ಗಸೂಚಿಗಳನ್ನು ನೀಡಿ, ನಿಗಮ/ಮಂಡಳಿಗಳಲ್ಲಿ ಸಹ ನಗದು ಘೋಷಣೆ ವಹಿ ನಿರ್ವಹಣೆ ಮಾಡುವಂತೆ ನಿರ್ದೇಶನ ನೀಡಿರುತ್ತದೆ. ಈ ಹಿನ್ನೆಲೆಯಲ್ಲಿ ನಿಗಮದ ಎಲ್ಲಾ ಹಂತದ ಕಛೇರಿಗಳಲ್ಲಿ ನಗದು ಘೋಷಣೆ ವಹಿ ನಿರ್ವಹಣೆ ಮಾಡಲು ಈ ಕೆಳಗಿನಂತೆ ಕ್ರಮ ವಹಿಸುವುದು.

1. ಅಧಿಕಾರಿ/ನೌಕರರು ಕರ್ತವ್ಯಕ್ಕೆ ಹಾಜರಾದ ತಕ್ಷಣ ಹಾಗೂ ಕಛೇರಿಯಿಂದ ನಿರ್ಗಮಿಸುವಾಗ ಕಛೇರಿಗೆ ತಂದ ನಗದು ಮೊತ್ತವನ್ನು ನಗದು ಘೋಷಣೆ ವಹಿಯಲ್ಲಿ ತನ್ನ ಸಹಿಯೊಂದಿಗೆ ಘೋಷಿಸತಕ್ಕದ್ದು.
2. ನಗದು ಘೋಷಣೆ ವಹಿಯು ಸಂಬಂಧಪಟ್ಟ ವಿಭಾಗ/ಶಾಖೆಯ ಅಧಿಕಾರಿಯ ವಶದಲ್ಲಿರತಕ್ಕದ್ದು ಮತ್ತು ಸದರಿ ಅಧಿಕಾರಿಯು ನೌಕರನು ಮಾಡಿದ ನಮೂದುಗಳ ಸತ್ಯಾಸತ್ಯತೆಯನ್ನು ಪರಿಶೀಲಿಸುವ ಅಧಿಕಾರವನ್ನು ಹೊಂದಿರುತ್ತಾರೆ.
3. ಯಾವುದೇ ಅಧಿಕಾರಿ/ನೌಕರನು ನಗದು ಘೋಷಿಸಿದ್ದಕ್ಕಿಂತ ಹೆಚ್ಚಿನ ಹಣವನ್ನು ಹೊಂದಿರುವುದು ಕಂಡುಬಂದರೆ, ಅಂತಹ ಹೆಚ್ಚುವರಿ ಹಣವನ್ನು ಅಕ್ರಮ ಸಂಪಾದನೆ ಎಂದು ಅರ್ಥೈಸಲಾಗುತ್ತದೆ ಹಾಗೂ ಅಂತಹ ಹೆಚ್ಚುವರಿ ಹಣವನ್ನು ಸಕ್ರಮ ಹಣ ಎಂದು ಸಾಬೀತುಪಡಿಸುವುದು ಅಧಿಕಾರಿ/ನೌಕರನ ಹೊಣೆಯಾಗಿರುತ್ತದೆ.
4. ನಗದು ಘೋಷಣೆ ವಹಿಯನ್ನು ಕಛೇರಿಯ ವೇಳೆಯ ಎಲ್ಲಾ ಸಮಯದಲ್ಲಿ ಯಾವುದೇ ಉನ್ನತ /ಇಲಾಖಾ ಮುಖ್ಯಸ್ಥರ/ ಸಕ್ಷಮ ಪ್ರಾಧಿಕಾರ/ವಿಭಾಗ ಮುಖ್ಯಸ್ಥರ/ ಘಟಕದ ಮುಖ್ಯಸ್ಥರ ತಪಾಸಣೆಗಾಗಿ ತೆರೆದಿರತಕ್ಕದ್ದು.

. . 2

Scanned with CamScanner

**ನಗದು ಘೋಷಣೆ ವಹಿ**

| ಕ್ರಸಂ | ಪದನಾಮ ಮತ್ತು ಹುದ್ದೆ | ಕಛೇರಿಗೆ ಆಗಮಿಸಿದ ಸಮಯ | ಮೊತ್ತ | ಕಛೇರಿಯಿಂದ ನಿರ್ಗಮಿಸಿದ ಸಮಯ | ಮೊತ್ತ | ಅಧಿಕಾರಿ/ ಸಿಬ್ಬಂದಿಯ ಸಹಿ | ಪರಿಶೀಲಿಸುವ ಅಧಿಕಾರಿಯ ಸಹಿ |
|---|---|---|---|---|---|---|---|
| | | | | | | | |

ಉಲ್ಲೇಖ-4 ರ ಆದೇಶದಂತೆ ನಿಗಮದ ಮಟ್ಟದಲ್ಲಿ ನಗದು ಘೋಷಣೆ ವಹಿ ನಿರ್ವಹಣೆಯ ಮೇಲ್ವಿಚಾರಣೆ ಮಾಡಲು ಉಪ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ಸಿಬ್ಬಂದಿ) ರವರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಲಾಗಿದೆ.

ಸಂಬಂಧಪಟ್ಟವರೆಲ್ಲರೂ ಮೇಲಿನ ಅದೇಶವನ್ನು ಮನದಟ್ಟು ಮಾಡಿಕೊಂಡು ಅದರಂತೆ ಕ್ರಮ ಕೈಗೊಳ್ಳತಕ್ಕದ್ದು. ಈ ಸುತ್ತೋಲೆಯು ತಕ್ಷಣದಿಂದ ಜಾರಿಗೆ ಬರುತ್ತದೆ.

(ಅಕ್ರಂ ಪಾಷ, ಭಾ.ಆ.ಸೇ.,)
ವ್ಯವಸ್ಥಾಪಕ ನಿರ್ದೇಶಕರು

<u>ಪ್ರತಿ ಮಾಹಿತಿಗಾಗಿ:</u>

1. ಮಾನ್ಯ ಅಧ್ಯಕ್ಷರು/ಉಪಾಧ್ಯಕ್ಷರು, ಕರಾರಸಾ ನಿಗಮ ರವರ ಆಪ್ತ ಕಾರ್ಯದರ್ಶಿಯವರಿಗೆ.
2. ವ್ಯವಸ್ಥಾಪಕ ನಿರ್ದೇಶಕರು, ಬೆಂಮಸಾಸಂಸ್ಥೆ/ವಾಕರಸಾಸಂಸ್ಥೆ/ಕಕರಸಾ ನಿಗಮ ರವರಿಗೆ.
3. ನಿರ್ದೇಶಕರು (ಸಿಬ್ಬಂದಿ:ಜಾಗೃತ)/ನಿರ್ದೇಶಕರು (ಮಾಹಿತಿ ತಂತ್ರಜ್ಞಾನ), ಕರಾರಸಾ ನಿಗಮ, ರವರಿಗೆ.

<u>ಪ್ರತಿ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:</u>

4. ಎಲ್ಲಾ ಇಲಾಖಾ ಮುಖ್ಯಸ್ಥರುಗಳು/ವಿಭಾಗೀಯ ಮುಖ್ಯಸ್ಥರುಗಳು, ಕರಾರಸಾ ನಿಗಮ ರವರುಗಳಿಗೆ
5. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂಮಸಾಸಂಸ್ಥೆ/ವಾಕರಸಾ ಸಂಸ್ಥೆ/ಕಕರಸಾ ನಿಗಮ ರವರಿಗೆ.
6. ಮುಖ್ಯ ಭದ್ರತಾ ಮತ್ತು ಜಾಗೃತಾಧಿಕಾರಿ, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ಕೇಂದ್ರ ಕಛೇರಿಯ ಸೂಚನಾ ಫಲಕದಲ್ಲಿ ಪ್ರದರ್ಶಿಸಿ, ಪ್ರದರ್ಶಿತಗೊಂಡ ಬಗ್ಗೆ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರವರಿಗೆ ವರದಿ ಸಲ್ಲಿಸುವುದು.
7. ಮುಖ್ಯ ಗಣಕ ವ್ಯವಸ್ಥಾಪಕರು, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ನಿಗಮದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
8. ಉಪ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ಸಿಬ್ಬಂದಿ) / (ನೇಮಕ), ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ.
9. ಪ್ರಧಾನ ಕಛೇರಿ ಪತ್ರ ಕಡತ.

Scanned with CamScanner